# ಕೆ.ಸಿ.ರೆಡ್ಡಿ ಪ್ರತಿಮೆ ಬದಲಿಸಲು ಸಿಎಂ ಸೂಚನೆ

## ವಿಧಾನಸೌಧದ ಆವರಣದಲ್ಲಿರುವ ಪ್ರತಿಮೆ | ಕೆ.ಸಿ.ರೆಡ್ಡಿ ಅವರ ಪುಣ್ಯತಿಥಿ

• ಕನ್ನಡಪ್ರಭ ವಾರ್ತೆ ಬೆಂಗಳೂರು ವಿಧಾನಸೌಧದಆವರಣದಲ್ಲಿಫೈಬರ್‌ನಿಂದ ನಿರ್ಮಿಸಿರುವ ರಾಜ್ಯದ ಮೊದಲ ಮುಖ್ಯಮಂತ್ರಿ ಕೆ.ಸಿ.ರೆಡ್ಡಿ ಅವರ ಪ್ರತಿಮೆಯನ್ನು ಬದಲಿಸುವುದಾಗಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ತಿಳಿಸಿದರು.

ರಾಜ್ಯದ ಮೊದಲ ಮುಖ್ಯಮಂತ್ರಿ ಕೆ.ಸಿ.ರೆಡ್ಡಿ ಅವರ ಪುಣ್ಯತಿಥಿ ಅಂಗವಾಗಿ ವಿಧಾನಸೌಧದ ಪಶ್ಚಿಮ ದ್ವಾರದಲ್ಲಿರುವ ರೆಡ್ಡಿಯವರ ಪ್ರತಿಮೆ ಮತ್ತು ಭಾವ ಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಮಾತನಾಡಿದ ಅವರು, ಫೈಬರ್‌ನಿಂದನಿರ್ಮಾಣವಾಗಿರುವಪ್ರತಿಮೆ ಬಿಸಿಲಿಗೆ ಕರಗುತ್ತಿದೆ. ಹೀಗಾಗಿ ಶೀಘ್ರದಲ್ಲಿ ಈಪ್ರತಿಮೆ ಬದಲಿಸಿ ಉತ್ತಮ ಗುಣಮಟ್ಟದ ಪ್ರತಿಮೆ ಸ್ಥಾಪನೆಗೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

ಕೃಷಿ ಕುಟುಂಬದಲ್ಲಿ ಜನಿಸಿ ಜನನಾಯಕರಾಗಿಬೆಳೆದುದೇಶದಕೈಗಾರಿಕಾ ಕ್ಷೇತ್ರದ ಸರ್ವತೋಮುಖ ಅಭಿವೃದ್ಧಿಗೆ ಕೆ.ಸಿ.ರೆಡ್ಡಿಯವರ ಕೊಡುಗೆ ಅಪಾರ. ವಕೀಲರಾಗಿ ವೃತ್ತಿ ಪ್ರಾರಂಭಿಸಿದ್ದ ಅವರು, ಪತ್ರಕರ್ತರು, ಸಮಾಜ ಸೇವಕರು ಹಾಗೂ ಜನನಾಯಕರಾಗಿದೇಶದರಾಜಕಾರಣದಲ್ಲಿ ಪ್ರಮುಖ ಪಾತ್ರ ವಹಿಸಿದ್ದರು ಎಂದು ಬಣ್ಣಿಸಿದರು.

ಸುಮಾರು ನಾಲ್ಕೂವರೆ ವರ್ಷಗಳ ಕಾಲ ರಾಜ್ಯದ ಮುಖ್ಯಮಂತ್ರಿಯಾಗಿ ರಾಜ್ಯದ ಅಭಿವೃದ್ಧಿಗೆ ಹಗಲು ರಾತ್ರಿ ಶ್ರಮಿಸಿದರು. ಕೇಂದ್ರಸಚಿವರಾಗಿತಮ್ಮಛಾಪುಮೂಡಿಸಿದ್ದ ಅವರು,ಮಧ್ಯಪ್ರದೇಶದರಾಜ್ಯಪಾಲರಾಗಿ ತಮ್ಮ ಹೆಜ್ಜೆ ಗುರುತನ್ನು ದಾಖಲಿಸಿದ್ದಾರೆ ಎಂದರು.

ಕೇಂದ್ರ ಸಚಿವರಾಗಿ ಅಂದಿನ ಮಧ್ಯಪ್ರದೇಶ, ಒರಿಸ್ಸಾ, ಬಿಹಾರ ಮತ್ತು ತಮಿಳುನಾಡಿನಲ್ಲಿ ಉಕ್ಕಿನ ಕಾರ್ಖಾನೆಗಳ ಸ್ಥಾಪನೆಗೊಳಿಸಿ ಬಲಿಷ್ಠ ಭಾರತದ ನಿರ್ಮಾಣಕ್ಕೆ ಸಾಕಷ್ಟು ಕೊಡುಗೆ ನೀಡಿದ್ದಾರೆ ಎಂದು ಶ್ಲಾಘಿಸಿದರು.

ಗೃಹ ಸಚಿವ ಬಸವರಾಜ ಬೊಮ್ಮಾಯಿ, ಕಂದಾಯ ಸಚಿವ ಆರ್.ಅಶೋಕ್, ಸರ್ಕಾರದ ಮುಖ್ಯ ಕಾರ್ಯದರ್ಶಿ ಪಿ. ರವಿಕುಮಾರ್ ಮತ್ತಿತರರು ಉಪಸ್ಥಿತರಿದ್ದರು.